# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 662(838) |
| ಸದಸ್ಯರ ಹೆಸರು | : | ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾಗಿದ ದಿನಾಂಕ | : | 23.07.2024 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಭದ್ರಾವತಿ ನಗರದ ರಸ್ತೆ ಅಗಲೀಕರಣ ನಗರದ ಸೌಂದರ್ಯೀಕರಣಕ್ಕೆ ಹಾಗೂ ಕೆರೆಗಳ ಅಭಿವೃದ್ಧಿಗೆ ಸರ್ಕಾರದ ಯೋಜನೆಗಳೇನು; ಕಳೆದ ಮೂರು ವರ್ಷಗಳಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ಒದಗಿಸುವುದು) | ಕಳೆದ ಮೂರು ವರ್ಷಗಳಲ್ಲಿ ಭದ್ರಾವತಿ ನಗರದ ರಸ್ತೆ ಅಗಲೀಕರಣ ನಗರದ ಸೌಂದರ್ಯೀಕರಣಕ್ಕೆ ಹಾಗೂ ಕೆರೆಗಳ ಅಭಿವೃದ್ಧಿಗೆ ಸಂಬಂಧ ಸರ್ಕಾರ ಕೈಗೊಂಡ ಕ್ರಮ ಮತ್ತು ಸರ್ಕಾರದ ಯೋಜನಾವಾರು ವಿವರ ಕೆಳಕಂಡಂತೆ<br>1. **ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ (ಮುನಿಸಿಪಾಲಿಟಿ) ಯೋಜನೆ (ಹಂತ-4)** ಯಡಿ 6 ರಸ್ತೆಗಳಿಗೆ ಅಲಂಕಾರಿಕ ಬೀದಿ ದೀಪಗಳನ್ನು ಅಳವಡಿಸಲಾಗಿರುತ್ತದೆ.<br>2. **ಕೇಂದ್ರ ಪುರಸ್ಕೃತ ಅಮೃತ್ 2.0 ಯೋಜನೆ**ಯಡಿ ಜಲಮೂಲಗಳ ಪುನಃಶ್ಚೇತನ ಮತ್ತು ಹಸಿರು ಜಾಗ ಮತ್ತು ಉದ್ಯಾನವನ ಅಭಿವೃದ್ಧಿ 21ನೇ ರಾಜ್ಯ ಉನ್ನತ ಮಟ್ಟದ ಸಂಚಾಲನಾ ಸಮಿತಿ ಸಭೆಯಲ್ಲಿ ಅನುಮೋದನೆಯಾಗಿದ್ದು, ಭದ್ರಾವತಿ ನಗರಸಭೆಗೆ ಜಲಮೂಲಗಳ ಪುನಃಶ್ಚೇತನಕ್ಕೆ ರೂ.1.60 ಕೋಟಿಗಳು ಹಸಿರು ಜಾಗ ಮತ್ತು ಉದ್ಯಾನವನ ಅಭಿವೃದ್ಧಿ ರೂ.0.40 ಕೋಟಿಗಳು ಒಟ್ಟು ರೂ.2.00 ಕೋಟಿಗಳು ಅನುಮೋದನೆಯಾಗಿದ್ದು, ಕೇಂದ್ರ ಸರ್ಕಾರದ ಅನುಮೋದನೆ ಪಡೆಯಲು ಅಪೇಕ್ಷ ಸಮಿತಿಗೆ ಮಂಡಿಸಲು ಕ್ರಮವಹಿಸಲಾಗುತ್ತಿದೆ. |
| ಆ) | ಈ ನಗರದಲ್ಲಿ ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ (ಮುನಿಸಿಪಾಲಿಟಿ) ಹಂತ-4 ಯೋಜನೆಯಡಿಯಲ್ಲಿ ಬಾಕಿ ಇರುವ ಕಾಮಗಾರಿಗಳಾವುವು; ಬಿಡುಗಡೆ ಮಾಡಲಾಗಿರುವ ಅನುದಾನ ಎಷ್ಟು; (ವಿವರ ಒದಗಿಸುವುದು) | **ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ (ಮುನಿಸಿಪಾಲಿಟಿ) ಯೋಜನೆ (ಹಂತ-4)** ಯಡಿ ಸರ್ಕಾರದ ಆದೇಶ ಸಂಖ್ಯೆ: ನಅಇ 81 ಐ ಎಸ್ ಟಿ 2022, ಬೆಂಗಳೂರು, ದಿನಾಂಕ:18-05-2022 ರಂತೆ ಭದ್ರಾವತಿ ನಗರಸಭೆಗೆ ರೂ.4000.00 ಲಕ್ಷಗಳು ಹಂಚಿಕೆಯಾಗಿದ್ದು, ಶೇಕಡ 85 ರಷ್ಟು ಮೊತ್ತ ರೂ.3400.00 ಲಕ್ಷಗಳ ಕಾಮಗಾರಿಗಳ ಕ್ರಿಯಾ ಯೋಜನೆ ಅನುಮೋದನೆಯಾಗಿರುತ್ತದೆ. |
| ಇ) | ಸದರಿ ಯೋಜನೆಯ ಅನುಷ್ಠಾನಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು; ಸದರಿ ಯೋಜನೆಯ ಯಾವ | ಸದರಿ ಅನುಮೋದಿತ ಕ್ರಿಯಾಯೋಜನೆಯಲ್ಲಿ ಕಲ್ಯಾಣ ಯೋಜನೆಗಳ ವೈಯಕ್ತಿಕ |

| | | |
|---|---|---|
| | ಹಂತದಲ್ಲಿದೆ: (ವಿವರ ಒದಗಿಸುವುದು) | ಕಾರ್ಯಕ್ರಮಗಳನ್ನು ಮತ್ತು ಕಟ್ಟಡ ಕಾಮಗಾರಿಗಳನ್ನು ಹೊರತುಪಡಿಸಿ ಒಟ್ಟು 17 ಕಾಮಗಾರಿಗಳಲ್ಲಿ 11 ಸಿವಿಲ್ ಮತ್ತು 1 ಎಲೆಕ್ಟ್ರಿಕಲ್ ಕಾಮಗಾರಿಗೆ 2 ಪ್ಯಾಕೇಜ್ ನಲ್ಲಿ ಟೆಂಡರ್ ಕರೆದು ಅನುಷ್ಠಾನಗೊಳಿಸಲಾಗುತ್ತಿದೆ ಈ ಎಲ್ಲಾ ಕಾಮಗಾರಿಗಳು ಪ್ರಗತಿಯಲ್ಲಿರುತ್ತದೆ. ರೂ.473.38 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ ಹಾಗೂ ಸದರಿ ಅನುದಾನವು ಬಳಕೆಯಾಗಿರುತ್ತದೆ.<br><br>ಪ್ರಗತಿಯಲ್ಲಿರುವ ಕಾಮಗಾರಿಗಳ ವಿವರವನ್ನು **ಅನುಬಂಧದಲ್ಲಿ** ನೀಡಿದೆ. |
| ಈ) | ಸದರಿ ಯೋಜನೆಯನ್ನು ಯಾವ ಕಾಲಪರಿಮಿತಿಯೊಳಗೆ ಪೂರ್ಣ ಪ್ರಮಾಣದಲ್ಲಿ ಅನುಷ್ಠಾನಗೊಳಿಸಲಾಗುವುದು? (ಸಂಪೂರ್ಣ ಮಾಹಿತಿ ಒದಗಿಸುವುದು) | ಈಗಾಗಲೇ ಟೆಂಡರ್ ಕರೆಯಲಾದ ಮೊದಲ ಹಂತದ ಕಾಮಗಾರಿಗಳನ್ನು ದಿನಾಂಕ:22.02.2025 ರ ಕಾಲಪರಿಮಿತಿಯೊಳಗೆ ಪೂರ್ಣಗೊಳಿಸಲಾಗುವುದು<br><br>ಸರ್ಕಾರದ ಮಾರ್ಗಸೂಚಿಯಂತೆ ಎರಡನೇಯ ಹಂತದಲ್ಲಿ ಕಟ್ಟಡ ಮತ್ತು ಇತರೆ ಕಾಮಗಾರಿಗಳಿಗೆ ಟೆಂಡರ್ ಕರೆಯುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. |

ಕಡತ ಸಂಖ್ಯೆ:ನಅಇ 88 ಸಮಸ 2024

(ರಹೀಂ ಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು